## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:ಸಾಮಾಜಿಕ ಭದ್ರತಾ ಯೋಜನೆ ವೃದ್ಧಾಪ್ಯ ವೇತನದಡಿ 60 ರಿಂದ 64ರ ವಯೋಮಾನದವರಿಗೆ ನೀಡಲಾಗುತ್ತಿರುವ ವೇತನವನ್ನು ರೂ.200/- ಗಳಿಂದ ರೂ.500/- ಗಳಿಗೆ ಹೆಚ್ಚಿಸುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಕಂಇ 5 ಡಿಎಸ್‌ಪಿ 2012 ದಿನಾಂಕ: 11.01.2012

*****

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ, ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನದಡಿ, ಬಡತನ ರೇಖೆಗಿಂತ ಕೆಳಗಿರುವ 60 ರಿಂದ 64 ವರ್ಷದೊಳಗಿನ ಅರ್ಹ ಫಲಾನುಭವಿಗಳಿಗೆ ರೂ.200/- ಗಳ ಮಾಸಾಶನವನ್ನು ನಿಗದಿಪಡಿಸಿ ನೀಡಲಾಗುತ್ತಿದೆ.

ಸರ್ಕಾರವು, 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ "ಪ್ರಸ್ತುತ 60 ರಿಂದ 64ರ ವಯೋಮಾನದವರಿಗೆ ನೀಡಲಾಗುತ್ತಿರುವ ವೃದ್ಧಾಪ್ಯ ವೇತನವನ್ನು 200/- ರೂ. ಗಳಿಂದ 500/- ರೂ. ಗಳಿಗೆ ಹೆಚ್ಚಿಸಲಾಗುವುದು" ಎಂದು ಘೋಷಿಸಿದೆ.

ಈ ಹಿನ್ನೆಲೆಯಲ್ಲಿ, ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನದಡಿ, ಬಡತನ ರೇಖೆಗಿಂತ ಕೆಳಗಿರುವ 60 ರಿಂದ 64 ವರ್ಷದೊಳಗಿನ ಅರ್ಹ ಫಲಾನುಭವಿಗಳಿಗೆ ರೂ.200/- ಗಳ ಮಾಸಾಶನವನ್ನು ರೂ.500/- ಗಳಿಗೆ ಹೆಚ್ಚಿಸಲು ಸರ್ಕಾರವು ತೀರ್ಮಾನಿಸಿ, ಕೆಳಕಂಡಂತೆ ಆದೇಶಿಸಿದೆ.

**ಸಕಾರದ ಆದೇಶ ಸಂಖ್ಯೆ: ಆರ್‌ಡಿ 45 ಡಿಎಸ್‌ಪಿ 2017**
**ಬೆಂಗಳೂರು, ದಿನಾಂಕ: 20.04.2017**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ರಾಜ್ಯದಲ್ಲಿ ಇಂದಿರಾಗಾಂಧಿ ವೃದ್ಧಾಪ್ಯ ವೇತನದಡಿ ಬಡತನ ರೇಖೆಗಿಂತ ಕೆಳಗಿರುವ ಅಸಹಾಯಕ ವೃದ್ಧರಿಗೆ ಸಾಮಾಜಿಕ ಹಾಗೂ ಆರ್ಥಿಕ ಭದ್ರತೆಯನ್ನೊದಗಿಸಲು 60 ರಿಂದ 64 ವರ್ಷದೊಳಗಿನ ಅರ್ಹ ಫಲಾನುಭವಿಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ರೂ.200/- ಗಳ ಮಾಸಾಶನವನ್ನು **ದಿನಾಂಕ:01.04.2017 ರಿಂದ ಜಾರಿಗೆ ಬರುವಂತೆ** ರೂ.500/- (ಐದುನೂರು ರೂಪಾಯಿಗಳು ಮಾತ್ರ) ಗಳಿಗೆ ಹೆಚ್ಚಿಸಿ ಆದೇಶಿಸಿದೆ.

ಈಗಾಗಲೇ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳಿಗೆ ಮಾಸಾಶನ ಹೆಚ್ಚಳ ಮಾಡಿ ವಿತರಿಸುವ ಅಧಿಕಾರವನ್ನು ನಿರ್ದೇಶಕರು, ಖಜಾನೆ ನಿರ್ದೇಶನಾಲಯ ಹಾಗೂ ಜಿಲ್ಲಾ/ಉಪ ಖಜಾನಾಧಿಕಾರಿಗಳು ಇವರಿಗೆ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 312 ವೆಚ್ಚ-7/2017 ದಿನಾಂಕ: 18.04.2017 ರಲ್ಲಿ ಹಾಗೂ ಯೋಜನಾ ಇಲಾಖೆಯು ಟಿಪ್ಪಣಿ ಸಂಖ್ಯೆ: ಪಿಡಿ 08 ಪಿಎಫ್ಒ 2017 ದಿನಾಂಕ: 20.04.2017 ರಲ್ಲಿ ನೀಡಿದ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಉಮಾಪತಿ)
ಸರ್ಕಾರದ ಉಪ ಕಾರ್ಯದರ್ಶಿ
(ವಿ.ನಿ. ಹಾಗೂ ನೋಂ & ಮು)

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಪ್ರಕಟಿತ 100 ಪ್ರತಿಗಳನ್ನು ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಕಂದಾಯ ಕಂದಾಯ ಭವನ, ಬೆಂಗಳೂರು ಇವರಿಗೆ ಒದಗಿಸಬೇಕೆಂದು ಕೋರಿದೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಮತ್ತು ಸಾಂಖಿಕ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (ಆಯವ್ಯಯ ಮತ್ತು ಸಂಪನ್ಮೂಲ) ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ವಿಧಾನಸೌಧ, ಬೆಂಗಳೂರು.
9. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರಗಿ ವಿಭಾಗ.
10. ಎಲ್ಲಾ ಜಿಲ್ಲಾಧಿಕಾರಿಗಳು.
11. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12. ಎಲ್ಲಾ ಉಪ ವಿಭಾಗಾಧಿಕಾರಿಗಳು.
13. ಎಲ್ಲಾ ತಹಶೀಲ್ದಾರ್‌ರುಗಳಿಗೆ.
14. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
15. ಹೆಚ್ಚುವರಿ ಪ್ರತಿ ಮತ್ತು ಶಾಖಾ ರಕ್ಷಾ ಕಡತ.